**ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಯಾದಗಿರಿ**

**ಸಿ.ಸಿ.ನಂ.1835/2024**

ಫಿರ್ಯಾದುದಾರರು : ಶ್ರೀ ರಾಕೇಶ ಶರ್ಮಾ ತಂದೆ ಶಾಂತಿಲಾಲ ಶರ್ಮಾ,

**ವಿರುದ್ಧ**

ಆಪಾದಿತ : ಶ್ರೀ ಸಾಗರ ಸಿಂಗ್ ಠಾಕೂರ
ತಂದೆ ಬೀರಬಲ್ ಸಿಂಗ್ ಠಾಕೂರ,

**ಆಪಾದನೆ**

**ಶ್ರೀ ಅರುಣ ಚೌಗುಲೆ ಬಿ.ಎ.,ಎಲ್ಎಲ್.ಬಿ.,(Honors) ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಯಾದಗಿರಿ ಆದ ನಾನು ಮೇಲ್ಕಂಡ ಆರೋಪಿತರಾದ ನಿಮ್ಮ ಮೇಲೆ ಕೆಳಕಂಡಂತೆ ಆಪಾದನೆಯನ್ನು ಹೊರಿಸುತ್ತಿದ್ದೇನೆ.**

ಪಿರ್ಯಾದಿದಾರರು ಮತ್ತು ಆಪಾದಿತನಾದ ನೀವು ಪರಿಚಯಸ್ಥರಾಗಿರುತ್ತೀರಿ ಹಾಗೂ ಸದರಿ ಪರಿಚಯದ ಆಧಾರದ ಮೇಲೆ ನೀವು ದೂರುದಾರರಿಂದ ದಿನಾಂಕ **09.06.2024** ರಂದು ರೂ.**1,65,000/-** ಗಳನ್ನು ಸಾಲಪಡೆದಿದ್ದು, ಸದರಿ ಹಣವನ್ನು ಮರುಪಾವತಿ ಮಾಡುವಂತೆ ಒತ್ತಾಯಿಸಿದಾಗ ಆಪಾದಿತನಾದ ನೀವು ಖಾತೆ ಹೊಂದಿರುವ ಯುನಿಯನ್ ಬ್ಯಾಂಕ್ ಆಫ್ ಇಂಡಿಯಾ, ಯಾದಗಿರಿ ಶಾಖೆಗೆ ಸೇರಿದ **023138** ಸಂಖ್ಯೆಯ ಚೆಕ್ ನಲ್ಲಿ ರೂ.**1,65,000/-** ಹಾಗೂ ದಿನಾಂಕ **09.09.2024** ಎಂದು ನಮೂದು ಮಾಡಿ ಬ್ಯಾಂಕಿಗೆ ಹಾಜರುಪಡಿಸಿ ನಗದೀಕರಿಸಿಕೊಳ್ಳುವಂತೆ ನೀಡಿದ್ದಿರಿ. ಸದರಿ ಚೆಕ್‌ನ್ನು ಪಿರ್ಯಾದುದಾರರು ನಗದೀರಣಕ್ಕಾಗಿ ತಾವು ಖಾತೆ ಹೊಂದಿರುವ ಹೆಚ್.ಡಿ.ಎಫ್.ಸಿ ಬ್ಯಾಂಕ್, ಯಾದಗಿರಿ ಶಾಖೆಯ ಮೂಲಕ ಹಾಜರು ಪಡಿಸಿದಾಗ**,** "Funds Insufficient" ಎಂಬ ಹಿಂಬರಹದೊಂದಿಗೆ ಅಮಾನ್ಯಗೊಂಡು ಚೆಕ್ಕನ್ನು ದಿನಾಂಕ **11.09.2024** ರಂದು ವಾಪಸ್ಸು ನೀಡಿರುತ್ತಾರೆ. ನಂತರ ಪಿರ್ಯಾದುದಾರರು ತಮ್ಮ ವಕೀಲರ ಮೂಲಕ ದಿನಾಂಕ **17.09.2024** ರಂದು ಅಪಾದಿತನಾದ ನಿಮ್ಮ ವಿಳಾಸಕ್ಕೆ ನೊಂದಾಯಿತ ಅಂಚೆಯ ಮೂಲಕ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದು, ದಿನಾಂಕ **27.09.2024** ರಂದು ಸದರಿ ನೋಟಿಸ್ ಜಾರಿಯಾಗಿರುತ್ತದೆ. ಆಪಾದಿತನಾದ ನೀವು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರು ದೂರುದಾರರಿಗೆ ಚೆಕ್‌ನ್ನು ನೀಡಿ ನಂತರ ಚೆಕ್ ಮೊತ್ತವನ್ನು ಪಾವತಿ ಮಾಡದೆ ಇರುವುದರ ಮೂಲಕ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ **138** ರ ರಿತ್ಯಾ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಾ ಎಂದು ಆಪಾದಿಸಲಾಗಿದೆ.

| | | |
|---|---|---|
| ಪ್ರಶ್ನೆ-೧ | ಃ | ನಿಮ್ಮ ಮೇಲೆ ಹೊರಿಸಲಾಗಿರುವ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ? |
| ಉತ್ತರ | ಃ | |
| ಪ್ರಶ್ನೆ-೨ | ಃ | ನೀವು ಸದರೀ ಆಪಾದನೆಯನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೆ ? |
| ಉತ್ತರ | ಃ | |

ಮೇಲ್ಕಂಡಂತೆ ಆಪಾದನೆಯನ್ನು ಆಪಾದಿತನಿಗೆ ತಿಳಿದ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರಗಳನ್ನು ಬರೆದುಕೊಂಡಿರುವುದಾಗಿ ದೃಢೀಕರಿಸಲಾಗಿದೆ.

ದಿನಾಂಕಃ 22.01.2025.
ಸ್ಥಳಃ ಯಾದಗಿರಿ

**ದಿವಾಣಿ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ,**
**ಯಾದಗಿರಿ**